ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ
ಶ್ರೀರಂಗಪಟ್ಟಣ

**ಸಿ.ಸಿ.221/2019**

| | |
|---|---|
| ಸಿ.ಡಬ್ಲ್ಯೂ : | 14 |
| ಪಿ.ಡಬ್ಲ್ಯೂ : | 3 |

| | | |
|---|---|---|
| ಸಾಕ್ಷಿದಾರರ ಹೆಸರು | : | ಕೆ.ಸಿ.ಶಿವಲಿಂಗಯ್ಯ |
| ತಂದೆ/ ಪತಿಯ ಹೆಸರು | : | ಲೇಟ್ ಚನ್ನಬಸಪ್ಪ |
| ವಯಸ್ಸು | : | 53 ವರ್ಷ |
| ವೃತ್ತಿ | : | ಎ.ಎಸ್.ಐ , ಕಿಕ್ಕೇರಿ ಪೊಲೀಸ್ ಠಾಣೆ |
| ವಾಸ | : | ಕಿಕ್ಕೇರಿ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕ: 28.05.2025**

**ಮುಖ್ಯ ವಿಚಾರಣೆ: ಮಾನ್ಯ ಎ ಪಿ ಪಿ ರವರಿಂದ**

ನಾನು 2017 ನೇ ಇಸವಿಯಿಂದ ಮೇ 2023 ನೇ ಇಸವಿಯವರೆಗೆ ಕೆ.ಆರ್. ಸಾಗರ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿ:01.02.2019 ರಂದು ನಾನು ಠಾಣಾ ಉಸ್ತುವಾರಿಯಲ್ಲಿದ್ದಾಗ ಚಾಸಾ.1 ರವರು ಠಾಣೆಗೆ ಹಾಜರಾಗಿ ಒಂದು ಲಿಖಿತ ದೂರನ್ನು ನನ್ನ ಸಮಕ್ಷಮ ಹಾಜರು ಪಡಿಸಿದ್ದು, ಸದರಿ ದೂರಿನ ಸಾರಾಂಶದ ಮೇಲಿಂದ ಅಪರಾಧ ಸಂಖ್ಯೆ 18/2019 ರಂತೆ ಪ್ರಕರಣವನ್ನು ದಾಖಲಿಸಿಕೊಂಡು ಪ್ರ.ವ.ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಯವರಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಗೆ ಈಗ ದೂರನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಈಗ ಪ್ರ.ವ.ವರದಿಯನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ನಂತರ ಈ ಪ್ರಕರಣದ ಕಡತವನ್ನು ಚಾಸಾ.15 ರವರಿಗೆ ವಹಿಸಿಕೊಟ್ಟಿರುತ್ತೇನೆ.

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ</u>

ನಾನು ದೂರುದಾರರ ಜೊತೆ ಸೇರಿಕೊಂಡು ಸುಳ್ಳು ದೂರನ್ನು ಪಡೆದುಕೊಂಡು ಸುಳ್ಳು ಪ್ರಕರಣವನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಗಾಯಾಳುವಿಗೆ ಪರಿಹಾರ ಸಿಗಲಿ ಎಂಬ ಉದ್ದೇಶದಿಂದ ನಾನು ಸುಳ್ಳು ಪ್ರಕರಣವನ್ನು ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.